# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಸದಸ್ಯರ ಹೆಸರು | : | ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಚುಕ್ಕೆಗುರುತ್ತಿಲ್ಲದ ಪ್ರಶ್ನೆ ಸಂಖ್ಯೆ | : | 467 |
| ಉತ್ತರಿಸಬೇಕಾದ ದಿನಾಂಕ | : | 06.03.2020. |
| ಉತ್ತರಿಸಬೇಕಾದ ಸಚಿವರು | : | ಮಾನ್ಯ ಪಶುಸಂಗೋಪನೆ, ಹಜ್ ಹಾಗೂ ವಕ್ಫ್ ಸಚಿವರು |

| ಕ್ರ.ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ. | ರಾಜ್ಯದ ಪಶುವೈದ್ಯ ಆಸ್ಪತ್ರೆಗಳಲ್ಲಿ ಜೀವರಕ್ಷಕ ಔಷಧಿಗಳ ಕೊರತೆ ಎದುರಾಗಿರುವುದಾಗಿ ಪತ್ರಿಕೆಗಳಲ್ಲಿ ವರದಿ ಪ್ರಸಾರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | ಹೌದು |
| ಆ. | ಪಶುಸಂಗೋಪನಾ ಇಲಾಖೆಗೆ ಔಷಧಿ ಖರೀದಿ ಮಾಡಲು ಸರ್ಕಾರದಿಂದ ಅನುಮತಿ ನೀಡಲಾಗಿದೆಯೇ? | ಸರ್ಕಾರದ ಆದೇಶ ಸಂಖ್ಯೆ: ಪಸಂಮೀ 61 ಪಪಾಯೋ 2019 ದಿ: 22-04-2019 ರನ್ವಯ 2019-20 ನೇ ಸಾಲಿನ ಅನುಮೋದಿತ ಕ್ರಿಯಾ ಯೋಜನೆಯಲ್ಲಿ ಪಶುಸಂಗೋಪನಾ ಇಲಾಖೆಗೆ ಔಷಧಿ ಖರೀದಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಅನುಮತಿ ನೀಡಲಾಗಿದೆ. |
| ಇ. | ಪಶು ಔಷದಿಗಳಿಗೆ ಇಡೀ ರಾಜ್ಯದಲ್ಲಿ ಏಕರೂಪ ಬೆಲೆ ನಿಗದಿಪಡಿಸುವ ಬಗ್ಗೆ ಸರ್ಕಾರದ ನಿಲುವೇನು? | ರಾಜ್ಯದಲ್ಲಿ ಪಶು ಔಷಧಿಗಳಿಗೆ ಇ-ಟೆಂಡರ್ ಮೂಲಕ ಟೆಂಡರ್ ಆಹ್ವಾನಿಸಿ ಏಕರೂಪಬೆಲೆ ನಿಗಧಿಪಡಿಸಲಾಗಿದೆ |
| ಈ. | ಪಶು ಆಸ್ಪತ್ರೆಗಳಲ್ಲಿ ಔಷಧಿಗಳ ಕೊರತೆಯಾಗದಂತೆ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ? | 2019-20 ನೇ ಸಾಲಿನಲ್ಲಿ ರಾಜ್ಯ ವಲಯದಡಿ ನಿಗದಿಪಡಿಸಲಾದ ಒಟ್ಟು ರೂ:1970.00 ಲಕ್ಷ ಹಾಗೂ ಜಿಲ್ಲಾ ಪಂಚಾಯತ್ ನಿಧಿಯಿಂದ ರೂ.30.00ಕೋಟಿಗಳ ಅನುದಾನದಲ್ಲಿ ಪಶುವೈದ್ಯ ಸಂಸ್ಥೆಗಳಿಗೆ ಅವಶ್ಯವಿರುವ ಔಷಧಿ,-ರಾಸಾಯನಿಕಗಳು ಮತ್ತು ಫೀಡ್ ಸಪ್ಲಿಮೆಂಟ್‌ಗಳನ್ನು ಪೂರೈಸುವ ಪ್ರಕ್ರಿಯೆ ಚಾಲ್ತಿಯಲ್ಲಿದೆ. |

**ಪಸಂಮೀ 104 ಸಲೆವಿ 2020**

ಪ್ರಭು ಬಿ. ಚವ್ಹಾಣ್
ಪಶುಸಂಗೋಪನೆ, ಹಜ್ ಮತ್ತು ವಕ್ಫ್ ಸಚಿವರು,